**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ: 3054-80-196-1-03-300 (ಯೋಜನೆ) Lumpsum ಅಡಿ ದಾವಣಗೆರೆ ಜಿಲ್ಲೆ ಚನ್ನಗಿರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಾಕಿ ಬಿಲ್ ಪಾವತಿಗೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ:ಆಇ/223/ ವೆಚ್ಚ-6/2014 ದಿನಾಂಕ:4-11-2016
2. ಸರ್ಕಾರದ ಆದೇಶ ಸಂ:ಗ್ರಾಅಪ:133:ಆರ್‌ಆರ್‌ಸಿ:16, (ಭಾಗ-6)ದಿನಾಂಕ:2-1-2017

**ಪ್ರಸ್ತಾವನೆ:**

ದಾವಣಗೆರೆ ಜಿಲ್ಲೆ ಚನ್ನಗಿರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಓದಲಾದ-1ರ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ರೂ.1000.00 ಲಕ್ಷಗಳನ್ನು ಪೂರಕ ಅಂದಾಜು-2ರಲ್ಲಿ ಒದಗಿಸಿರುವುದಾಗಿ ತಿಳಿಸಿದಂತೆ, ಮೇಲೆ ಓದಲಾದ-2 ರ ಆದೇಶದಲ್ಲಿ ದಾವಣಗೆರೆ ಜಿಲ್ಲೆ ಚನ್ನಗಿರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ರೂ.1000.00 ಲಕ್ಷ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶವನ್ನು ಹೊರಡಿಸಲಾಗಿರುತ್ತದೆ.

ಪ್ರಸ್ತುತ ಪೂರಕ ಅಂದಾಜು-2ರಲ್ಲಿ ಆರ್ಥಿಕ ಇಲಾಖೆಯು ಅನುದಾನ ಒದಗಿಸಿದ್ದು, ಮೇಲೆ ಓದಲಾದ -2 ರ ಆದೇಶದಂತೆ ಕೈಗೊಂಡ ದಾವಣಗೆರೆ ಜಿಲ್ಲೆ ಚನ್ನಗಿರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಗಾಗಿ ಲೆಕ್ಕ ಶೀರ್ಷಿಕೆ-3054-80-196-1-03-300 (ಯೋಜನೆ) Lumpsum ಅಡಿ ಸದರಿ ಪೂರ್ಣಗೊಂಡ ಕಾಮಗಾರಿಯ ಬಿಲ್ ಪಾವತಿಗಾಗಿ ರೂ.1000.00 ಲಕ್ಷಗಳನ್ನು ದಾವಣಗೆರೆ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:133;ಆರ್‌ಆರ್‌ಸಿ:2016(ಭಾ-6) ಬೆಂಗಳೂರು, ದಿನಾಂಕ:17-2-2017.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ದಾವಣಗೆರೆ ಜಿಲ್ಲೆ ಚನ್ನಗಿರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಸಲು ರೂ.1000.00 ಲಕ್ಷ (ರೂಪಾಯಿಗಳು ಒಂದು ಸಾವಿರ ಲಕ್ಷಗಳು ಮಾತ್ರ)ಗಳನ್ನು ಲೆಕ್ಕ ಶೀರ್ಷಿಕೆ-3054-80-196-1-03-300 (ಯೋಜನೆ) Lumpsum (scheme Head-3054-00-101-0-29-172- ಯೋಜನೆ) ಅಡಿ ಕೆಳಕಂಡ ಷರತ್ತುಗಳಿಗೊಳಪಟ್ಟು ದಾವಣಗೆರೆ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು:**

1. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಅನುದಾನವನ್ನು ಕ್ರೆಡಿಲ್ ವಿಭಾಗ ರವರಿಂದ ಅನುಷ್ಠಾನಗೊಳಿಸಿದ ದಾವಣಗೆರೆ ಜಿಲ್ಲೆ ಚನ್ನಗಿರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಾಕಿ ಬಿಲ್ ರೂ.1000.00 ಲಕ್ಷ ಪಾವತಿಗೆ ಮಾತ್ರ ಉಪಯೋಗಿಸತಕ್ಕದ್ದು. ಈ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ ಹಾಗೂ ಯಾವುದೇ ಕಾರಣಕ್ಕೂ ವ್ಯಪಗತವಾಗದಂತೆ ನೋಡಿಕೊಳ್ಳತಕ್ಕದ್ದು.

2. ಪೂರ್ಣಗೊಂಡ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವುದನ್ನು ಖಚಿತಪಡಿಕೊಂಡು ಕಾಮಗಾರಿಗಳ ಬಿಲ್ಲುಗಳನ್ನು ಪಾವತಿಸತಕ್ಕದ್ದು. ತಪ್ಪಿದಲ್ಲಿ ಕಾರ್ಯಪಾಲಕ ಇಂಜಿನಿಯರ್ ಹಾಗೂ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಜವಾಬ್ದಾರರಾಗುತ್ತಾರೆ.

3. ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಗೆ ಒದಗಿಸತಕ್ಕದ್ದು.

4. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ಹೆಚ್ಚುವರಿ ರಸ್ತೆ ಕಾಮಗಾರಿಯನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

5. 2014-15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಸಲು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ, ಪ್ರಸ್ತುತ ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಸಂಬಂಧಿಸಿದಂತೆ ಕೈಗೊಂಡು ಪೂರ್ಣಗೊಳಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವ ನಿಬಂಧನೆಗೊಳಪಡಿಸಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಅ.ಟಿ. ಸಂ:ಗ್ರಾಅಪ:222:ಎಎಫ್‌ಎನ್:2016 ದಿನಾಂಕ: 12-12-2016 ಹಾಗೂ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ:ಆಇ/223/ ವೆಚ್ಚ-6/2014 ದಿನಾಂಕ:4-11-2016ರಲ್ಲಿ ನೀಡಿದ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ.ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು

7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಜಿಲ್ಲಾ ಖಜಾನಾಧಿಕಾರಿಗಳು, ದಾವಣಗೆರೆ ಜಿಲ್ಲೆ.
14. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
15. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ದಾವಣಗೆರೆ
17. ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಿಲ್ ಸಂಸ್ಥೆ, ಬೆಂಗಳೂರು.
18. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ದಾವಣಗೆರೆ
19. ಉಪ ನಿರ್ದೇಶಕರು, ಕ್ರೆಡಿಲ್ ವಿಭಾಗ, ದಾವಣಗೆರೆ
20. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
21. ರಕ್ಷಾ ಕಡತ / ಹೆಚ್ಚುವರಿ ಪ್ರತಿ.